**Akashvani : Bangalore**
**Regional Bulletin In Kannada**
**18.05.2025 / 14.30 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**18.05.2025 / 14.30 hrs**

**<><*<><>*><>**

ಮುಖ್ಯಾಂಶಗಳು

೧. ಮುಂಗಾರುಪೂರ್ವ ಮಳೆಗೆ ಬೆಂಗಳೂರು ಅಸ್ತವ್ಯಸ್ಥ - ಸರ್ಕಾರದ ವಿರುದ್ಧ ಕೇಂದ್ರ ಸಚಿವ ಕುಮಾರಸ್ವಾಮಿ ಅಸಮಾಧಾನ

೨. ಜೂನ್ ೧ ರಿಂದ ರಾಜ್ಯದ ಕರಾವಳಿಯಲ್ಲಿ ಯಾಂತ್ರೀಕೃತ ಮೀನುಗಾರಿಕೆ ನಿಷೇಧ

೩. ಸೈನಿಕರಿಗೆ ನೈತಿಕ ಬೆಂಬಲ ಸೂಚಿಸಿ ರಾಜ್ಯದ ಹಲವೆಡೆ ತಿರಂಗಯಾತ್ರೆ

೪. ಬೆಂಗಳೂರು ಸೇರಿ ರಾಜ್ಯಾದ್ಯಂತ ಇಂದು ಮಳೆ ಹವಮಾನ ಇಲಾಖೆ ಮುನ್ಸೂಚನೆ

**************

ರಾಜಧಾನಿ ಬೆಂಗಳೂರಿನಲ್ಲಿ ಕಳೆದ ಎರಡು ದಿನಗಳಿಂದ ಧಾರಾಕಾರ ಮಳೆಯಾಗುತ್ತಿದೆ. ನಿನ್ನೆ ಸುರಿದ ಮುಂಗಾರು ಪೂರ್ವಮಳೆಗೆ ಜನಜೀವನ ಅಸ್ತವ್ಯಸ್ತವಾಗಿತ್ತು. ಹಲವೆಡೆ ಮರಗಳು ಧರೆಗುರುಳಿ ವಾಹನ ಸಂಚಾರ ಅಸ್ತವ್ಯವಾಗಿತ್ತು. ಮಹದೇವಪುರ ವಲಯದ ಸಾಯಿ ಬಡಾವಣೆ ಜಲಾವೃತವಾಗಿತ್ತು. ಇಂದು ಈ ಪ್ರದೇಶಕ್ಕೆ ಬಿಬಿಎಂಪಿ ಮುಖ್ಯ ಆಯುಕ್ತರಾದ ಮಹೇಶ್ವರ್ ರಾವ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಬೆಂಗಳೂರಿನಲ್ಲಿ ಮಳೆ ಸಂದರ್ಭದಲ್ಲಿ ಉಂಟಾಗುವ ಸಮಸ್ಯೆ ಕುರಿತಂತೆ ಮಾಜಿ ಮುಖ್ಯಮಂತ್ರಿ ಕೇಂದ್ರ ಸಚಿವ ಕುಮಾರಸ್ವಾಮಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಸಾಮಾಜಿಕ ಜಾಲ ತಾಣದಲ್ಲಿ ಪೋಸ್ಟ್ ಮಾಡಿರುವ ಅವರು ಬೆಂಗಳೂರು ಹೆಚ್ಚು ಮಳೆಯಾದರೆ ಮುಳುಗುತ್ತದೆ. ಕಡಿಮೆ

ಸುರಿದರೆ ತೇಲುತ್ತದೆ. ರಸ್ತೆಗಳಲ್ಲಿಯೇ ಕೆರೆ, ಚರಂಡಿ ಎಂದು ವ್ಯಂಗ್ಯವಾಡಿದ್ದಾರೆ. ಇದು ಗ್ರೇಟರ್ ಬೆಂಗಳೂರು ಅಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

**************

ಯಾಂತ್ರೀಕೃತ ಮೀನುಗಾರಿಕೆ ದೋಣಿಯನ್ನು ಬಳಸಿ ಕರ್ನಾಟಕ ಕರಾವಳಿಯಲ್ಲಿ ಪ್ರತಿ ವರ್ಷ ಜೂನ್ ೧ ರಿಂದ ಜುಲೈ ೩೧ರ ವರೆಗೆ ಒಟ್ಟು ೬೧ ದಿನಗಳ ಕಾಲ ಮೀನು ಹಿಡಿಯುವುದನ್ನು ನಿಷೇಧಿಸಿರುವ ಹಿನ್ನಲೆ, ಉತ್ತರ ಕನ್ನಡ ಜಿಲ್ಲೆಯಲ್ಲಿ ಎಲ್ಲಾ ಮೀನುಗಾರಿಕಾ ಯಾಂತ್ರೀಕೃತ ದೋಣಿಗಳು ಜೂನ್ ೧ ರಿಂದ ಜುಲೈ ೩೧ರ ವರೆಗೆ ಮೀನುಗಾರಿಕೆ ಮಾಡುವುದನ್ನು ನಿಷೇಧಿಸಲಾಗಿದೆ ಉತ್ತರಕನ್ನಡ ಮೀನುಗಾರಿಕೆ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

ಮೀನುಗಾರಿಕೆ ನಿಷೇಧಿತ ಅವಧಿಯಲ್ಲಿ ಕೇವಲ ೧೦ ಅಶ್ವ ಶಕ್ತಿಯ ವರೆಗಿನ ಸಾಮರ್ಥ್ಯದ ಮೋಟಾರೀಕೃತ ದೋಣಿ ಹಾಗೂ ಸಾಂಪ್ರದಾಯಿಕ/ ನಾಡದೋಣಿಗಳ ಮೂಲಕ ಮೀನುಗಾರಿಕೆಯಲ್ಲಿ ತೊಡಗಲು ಅನುಮತಿ ಇರುತ್ತದೆ. ಆದಾಗ್ಯೂ ಇಲಾಖೆ ಹಾಗೂ ಜಿಲ್ಲಾಡಳಿತದಿಂದ ಮೀನುಗಾರರ ಸುರಕ್ಷತೆಗಾಗಿ ನೀಡಲಾಗುವ ಸೂಚನೆ/ ಮಾರ್ಗಸೂಚಿಯನ್ನು ಪಾಲಿಸಬೇಕು. ಮಾರ್ಗಸೂಚಿಯನ್ನು ಉಲ್ಲಂಘಿಸುವ ಮೀನುಗಾರಿಕೆ ದೋಣಿಗಳು ಮತ್ತು ಮೀನುಗಾರರು ಕರ್ನಾಟಕ ಕಡಲ ಮೀನುಗಾರಿಕೆ (ನಿಯಂತ್ರಣ) ಕಾಯ್ದೆಯನ್ವಯ ದಂಡನೆಗೆ ಹೊಣೆಯಾಗುವುದಲ್ಲದೇ, ಒಂದು ವರ್ಷದ ಅವಧಿಗೆ ರಾಜ್ಯ ಮಾರಾಟಕರ ರಹಿತ ಡೀಸೆಲ್ ಪಡೆಯಲು ಅನರ್ಹರಾಗುತ್ತಾರೆ ಎಂದು ತಿಳಿಸಿದ್ದಾರೆ.

**************

ಆಪರೇಷನ್ ಸಿಂಧೂರದಲ್ಲಿ ಪಾಲ್ಗೊಂಡ ಸೈನಿಕರಿಗೆ ನೈತಿಕ ಬೆಂಬಲ ಹಾಗೂ ಅಭಿನಂದನೆ ಸಲ್ಲಿಸುವ ತಿರಂಗಾ ಯಾತ್ರೆ ರಾಜ್ಯಾದ್ಯಂತ ನಡೆಯಿತು.

ದೇಶದ ಯೋಧರು ಇಡೀ ವಿಶ್ವಕ್ಕೆ ಭಾರತದ ಸಾರ್ವಭೌಮತ್ವವನ್ನು ತೋರಿಸಿಕೊಟ್ಟಿದ್ದಾರೆ ಎಂದು ಕೇಂದ್ರ ಜಲಶಕ್ತಿ ಹಾಗೂ ರೈಲ್ವೆ ರಾಜ್ಯ ಖಾತೆ ಸಚಿವ ವಿ. ಸೋಮಣ್ಣ ತಿಳಿದ್ದಾರೆ.

ತುಮಕೂರಿನಲ್ಲಿ ತಿರಂಗಯಾತ್ರೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಪಾಕ್ ವಿರುದ್ಧ ದಾಳಿ ದೇಶದ ಅಖಂಡತೆ ಮತ್ತು ಸಾರ್ವಭೌಮತೆಗೆ ಹಿಡಿದ ಕೈಗನ್ನಡಿಯಾಗಿದೆ ಎಂದು ಹೇಳಿದ್ದಾರೆ.

ನಾಗರೀಕ ಸಂಘಟನೆಗಳು ಕೈಗೊಂಡಿದ್ದ ತಿರಂಗ ಯಾತ್ರೆಯಲ್ಲಿ ಭಾಗವಹಿಸಿ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ  ದೇಶದಲ್ಲಿ ಜನರಲ್ಲಿ ಜಾಗೃತಿ ಮೂಡಿಸುವುದು ಯಾತ್ರೆಯ ಉದ್ದೇಶ ಎಂದು ತಿಳಿಸಿದ್ದಾರೆ.

ಯಾದಗಿರಿ ನಗರದ ಮೈಲಾಪುರ ಬೇಸ್ ನಿಂದಾ ಮಹಾತ್ಮ ಗಾಂಧಿ ವೃತ್ತದ ವರೆಗೆ ಬೃಹತ್ ತಿರಂಗಾ ಯಾತ್ರೆ ನಡೆಯಿತು. ಮಹಾತ್ಮ ಗಾಂಧಿ ವೃತದಲ್ಲಿ ಸಮಾವೇಶಗೊಂಡ ಯಾತ್ರೆಯಲ್ಲಿ ಸಾವಿರಾರು ನಾಗರಿಕರು ಭಾರತ್ ಮಾತಾ ಕೀ ಜೈ, ಭಾರತೀಯ ಸೈನಿಕರಿಗೆ ಜಯವಾಗಲಿ ಎಂಬ ಘೋಷಣೆ ಕೂಗಿದರು. ಭಾರತೀಯ ಮಾಜಿ ಯೋಧರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಲಿಂಗನಗೌಡ ಮಾಲೀಪಾಟೀಲ್ ಮಾತನಾಡಿ, ಆಪರೇಷನ್ ಸಿಂಧೂರ ಇನ್ನೂ ಮುಗಿದಿಲ್ಲ. ಇನ್ನೊಮ್ಮೆ ನಡೆದರೆ ಪಿಒಕೆ ನಮ್ಮದಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

**************

ಅವೈಜ್ಞಾನಿಕ ನೀತಿಯಿಂದ ಅಬಕಾರಿ ಉದ್ಯಮ ಸಂಕಷ್ಟಕ್ಕೆ ಸಿಲುಕಿದೆ ಅಪಾಯಕಾರಿ ನೀತಿಗಳ ಮೂಲಕ ಅಬಕಾರಿ ಆದಾಯದ ಮೂಲಕ್ಕೆ ಕೊಡಲಿ ಪೆಟ್ಟು ನೀಡಲು ರಾಜ್ಯ ಸರ್ಕಾರ ಮುಂದಾಗಿದೆ ಎಂದು ವಿಧಾನಸಭೆ ಪ್ರತಿಪಕ್ಷದ ನಾಯಕರಾದ ಆರ್. ಅಶೋಕ್ ಆರೋಪಿಸಿದ್ದಾರೆ.

ಚಿಕ್ಕಮಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತಾನಾಡಿದ ಅವರು ದರ ಮತ್ತು ಸನ್ನದು ಶುಲ್ಕ ಏರಿಕೆಗೂ ಒಂದು ಮಾನದಂಡ ಇರುತ್ತದೆ. ಆದರೆ ಒಂದೇ ವರ್ಷದಲ್ಲಿ ಮದ್ಯ ಮಾರಾಟ ಮತ್ತು ಸನ್ನದು ಶುಲ್ಕವನ್ನು ಅಡ್ಡಾದಿಡ್ಡಿ ಹೆಚ್ಚಿಸುತ್ತಿರುವುದು ಉದ್ಯಮದ ಮೇಲೆ ಪ್ರತಿಕೂಲ ಪರಿಣಾಮ ಬೀರಲಿದೆ ಎಂದು ಎಚ್ಚರಿಸಿದ್ದಾರೆ.

**************

ಕೇಂದ್ರ ವಾರ್ತಾ ಮತ್ತು ಪ್ರಸಾರ ಹಾಗೂ ಸಂಸದೀಯ ವ್ಯವಹಾರಗಳ ರಾಜ್ಯ ಸಚಿವ ಡಾ. ಎಲ್. ಮುರುಗನ್ ಅವರು ಇಂದು ಬೆಂಗಳೂರಿನ ದೂರದರ್ಶನ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ವೇಳೆ ಅವರು, ಅಧಿಕಾರಿಗಳೊಂದಿಗೆ ದೂರದರ್ಶನ ಕೇಂದ್ರದ ಕಾರ್ಯ ವೈಖರಿ ಕುರಿತು ಚರ್ಚೆ ನಡೆಸಿ, ಮಾಹಿತಿ ಪಡೆದುಕೊಂಡರು. ಈ ಸಂದರ್ಭದಲ್ಲಿ ಕೇಂದ್ರ ವಾರ್ತಾ ಶಾಖೆಯ ಹೆಚ್ಚುವರಿ ಮಹಾ ನಿರ್ದೇಶಕರಾದ ಎಸ್. ಜಿ. ರವೀಂದ್ರ ದೂರದರ್ಶನ ಕೇಂದ್ರದ ಮಹಾನಿರ್ದೇಶಕರುಗಳಾದ ಹನುಮಂತ್ , ಭಾಗ್ಯವಾನ್,ಸುದ್ದಿ ವಿಭಾಗದ ಮುಖ್ಯಸ್ಥರಾದ ಬಿ.ಎ.ಕೆಶವಮೂರ್ತಿ, ಕಾರ್ಯಕ್ರಮ ವಿಭಾಗದ ಮುಖ್ಯಸ್ಥರಾದ ಹೆಚ್.ಎನ್. ಆರತಿ, ಆಕಾಶವಾಣಿ ಸುದ್ದಿ ವಿಭಾಗದ ಮುಖ್ಯಸ್ಥರಾದ ರೋಯ್ ಚಾಕೋ ಮತ್ತು ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಸಚಿವರು ಏಕ್ ಪೇಡ್ ಮಾ ಕೆ ನಾಮ್ ಅಭಯಾನದ ಅಂಗವಾಗಿ ದೂರದರ್ಶನ ಕೇಂದ್ರದಲ್ಲಿ ಗಿಡ ನೆಟ್ಟರು.

**************

ದೇಶದ ರಕ್ಷಣೆಗಾಗಿ ಹೆಚ್ಚಿನ ಸಂಖ್ಯೆಯಲ್ಲಿ ಯುವ ಜನತೆ ಸೇನೆ ಸೇರಲು ಮುಂದಾಗಬೇಕು ಎಂದು ಭಾರತೀಯ ಭೂ ಸೇನೆಯಲ್ಲಿ ೨೭ ವರ್ಷಗಳ ಕಾಲ ಸೇವೆ ಸಲ್ಲಿಸಿ ಈಗ ನಿವತ್ತ ಜೀವನ ನಡೆಸುತ್ತಿರುವ ಮಾಜಿ ಸೈನಿಕ ಮಂಗಳೂರಿನ ವಿಠಲ್ ರಾವ್ ಕರೆ ನೀಡಿದ್ದಾರೆ.

ಸೈನಿಕನಾಗಿದ್ದ ಅವಧಿಯಲ್ಲಿನ ತಮ್ಮ ಅನುಭವವನ್ನು ಆಕಾಶವಾಣಿಯೊಂದಿಗೆ ಹಂಚಿಕೊಂಡ ಅವರು, ಯುವಜನತೆಯಿಂದ ಮಾತ್ರ ಈ ದೇಶ ರಕ್ಷಣೆ ಸಾಧ್ಯ. ದೇಶಪ್ರೇಮವನ್ನು ಪ್ರತಿಯೊಬ್ಬ ಪ್ರಜೆಯೂ ಮೈಗೂಡಿಸಿಕೊಳ್ಳಬೇಕು. ಇಂದು ನಾವು ನೆಮ್ಮದಿಯ ಜೀವನ ನಡೆಸುತ್ತಿದ್ದೇವೆ ಎಂದರೆ, ಅದಕ್ಕೆ ಕಾರಣ ರಾತ್ರಿ ಹಗಲೆನ್ನದೆ ಗಡಿ ಕಾಯುವ ಸೈನಿಕರು. ಅವರ ತ್ಯಾಗ ಪರಿಶ್ರಮವನ್ನು ನಾವೆಂದೂ ಮರೆಯಬಾರದು ಎಂದು ವಿಠಲ್ ರಾವ್ ಹೇಳಿದರು.

ಧ್ವನಿ : ವಿಠ್ಠಲ್ ರಾವ್

**************

ಕೋಲಾರ ಜಿಲ್ಲೆಯ ಬಂಗಾರಪೇಟೆ ತಾಲೂಕಿನಲ್ಲಿ ನಿನ್ನೆ ಸುರಿದ ಬಿರುಗಾಳಿ ಸಹಿತ ಮಳೆಗೆ ಪಟ್ಟಣದ ಕೆಲ ರಸ್ತೆಗಳು ಕೆರೆಗಳಂತೆ ಮಾರ್ಪಟ್ಟು, ಜನತೆ ಹಾಗೂ ವಾಹನ ಸಂಚಾರಕ್ಕೆ ತೊಂದರೆ ಉಂಟಾಗಿತ್ತು. ತಾಲೂಕಿನಾದ್ಯಂತ ೨ ದಿನಗಳಿಂದ ಉತ್ತಮ ಮಳೆಯಾಗುತ್ತಿದ್ದು ಸಣ್ಣಪುಟ್ಟ ಕೆರೆ ಕುಂಟೆಗಳಲ್ಲಿ ನೀರು ಶೇಖರಣೆಯಾಗಿದೆ. ರೈತರ ತೋಟಗಳಲ್ಲಿ ನೀರು ನಿಂತು ಬೆಳೆಗೆ ಹಾನಿಯಾಗಿದೆ.

ಪಟ್ಟಣದಲ್ಲಿ ಚರಂಡಿ ವ್ಯವಸ್ಥೆ ಸಮರ್ಪಕವಾಗಿ ಇಲ್ಲದಿರುವುದರಿಂದ ಹಲವು ಕಡೆ ನೀರು ನಿಂತು ವಾಹನ ಸಂಚಾರಕ್ಕೆ ಅಡಚಣೆಯಾಗಿತ್ತು. ತಗ್ಗು ಪ್ರದೇಶಗಳಿಗೆ ಮಳೆ ನೀರು ನುಗ್ಗಿ ಅವಾಂತರ ಸೃಷ್ಟಿಯಾಗಿದೆ.

**************

ಚಿತ್ರದುರ್ಗ ನಗರಸಭೆಯ ಘನತ್ಯಾಜ್ಯ ವಸ್ತು ವಿಲೇವಾರಿ ಘಟಕ ನಿರ್ಮಾಣ ಹಾಗೂ ವಿವಿಧ ಮೂಲಭೂತ ಸೌಕರ್ಯ ನಿರ್ಮಾಣದ ಕಾಮಗಾರಿಗಳಿಗೆ ಶಾಸಕ ಕೆ.ಸಿ. ವೀರೇಂದ್ರ ಅವರು ಚಾಲನೆ ನೀಡಿದರು.

ನಗರಸಭೆಯ ಘನತ್ಯಾಜ್ಯ ವಸ್ತು ವಿಲೇವಾರಿ ಘಟಕದಲ್ಲಿ ೩.೨೨ ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸುತ್ತಿರುವ ಒಣ ತ್ಯಾಜ್ಯ ಸಂಸ್ಕರಣಾ ಘಟಕದ ಕಾಮಗಾರಿಗೆ ಶಾಸಕ ವೀರೇಂದ್ರ ಅವರು ಗುದ್ದಲಿ ಪೂಜೆ ನೆರವೇರಿಸಿದರು.

**************

ರಾಜ್ಯದ ಮಹಿಳೆಯರ ಸಬಲೀಕರಣದ ಉದ್ದೇಶದಿಂದ ಜಾರಿಗೆ ತಂದ ಶಕ್ತಿ ಯೋಜನೆಯಡಿ, ಉತ್ತರ ಕನ್ನಡ ಜಿಲ್ಲೆಯಲ್ಲಿ ಇದುವರೆಗೆ ೧೧.೮೧ ಕೋಟಿ ಮಹಿಳೆಯರು ಉಚಿತ ಪ್ರಯಾಣದ ಪ್ರಯೋಜನ ಪಡೆದಿದ್ದಾರೆ ಎಂದು ಶಿರಸಿ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವಿಭಾಗೀಯ ನಿಯಂತ್ರಣಾಧಿಕಾರಿ ಬಸವರಾಜ್ ಅಮ್ಮನವರ್ ತಿಳಿಸಿದ್ದಾರೆ.

ಶಕ್ತಿ ಯೋಜನೆಯ ಜಾರಿಯಾದ ನಂತರ ಜಿಲ್ಲೆಯಲ್ಲಿ ಮಹಿಳೆಯರು, ವಿದ್ಯಾರ್ಥಿನಿಯರು ಮತ್ತು ಲಿಂಗತ್ವ ಅಲ್ಪ ಸಂಖ್ಯಾತರಿಗೆ ಉಚಿತ ಪ್ರಯಾಣದ ಒಟ್ಟು ರೂ. ೩೪೩.೮೭ ಕೋಟಿ ಮೊತ್ತದ ಉಚಿತ ಟಿಕೆಟ್ ಗಳನ್ನು ವಿತರಣೆ ಮಾಡಲಾಗಿದ್ದು, ಈ ಮೊತ್ತವು ರಸ್ತೆ ಸಾರಿಗೆ ಸಂಸ್ಥೆಗೆ ಪ್ರಮುಖ ಆದಾಯವಾಗಿದೆ.

ಉತ್ತರ ಕನ್ನಡ ಜಿಲ್ಲಾ ವ್ಯಾಪ್ತಿಗೆ ೮೪ ಹೊಸ ಬಸ್ ಗಳು ಮಂಜೂರಾಗಿದ್ದು, ಖಾಲಿಯಿದ್ದ ಡ್ರೈವರ್ ಮತ್ತು ಕಂಡಕ್ಟರ್ ಗಳ ಹುದ್ದೆಗೆ ನೇಮಕಾತಿ ನಡೆಯುತ್ತಿದೆ. ವಾಯುವ್ಯ ಕರ್ನಾಟಕ ಸಾರಿಗೆ ಸಂಸ್ಥೆಗೆ ೩೦೦ ಹೊಸ ಬಸ್ ಗಳಿಗೆ ಟೆಂಡರ್ ಆಗಿದ್ದು, ಅದರಲ್ಲಿಯೂ ಜಿಲ್ಲೆಗೆ ಹೊಸ ಬಸ್‌ಗಳು ಬರಲಿವೆ ಎಂದು ವಿಭಾಗೀಯ ನಿಯಂತ್ರಣಾಧಿಕಾರಿ ತಿಳಿಸಿದ್ದಾರೆ.

**************

ಮೈಸೂರು ನಗರದ ಕೇಂದ್ರ ಜಿ.ಎಸ್.ಟಿ ಆಯೋಗವು ಇಂದು ಸಿದ್ದಾರ್ಥ ನಗರದ ಜಿ.ಎಸ್.ಟಿ ಭವನದಲ್ಲಿ ಏರ್ಪಡಿಸಿದ್ದ ಸೈಕಲ್ ಮ್ಯಾರಥಾನ್ ಅಭಿಯಾನಕ್ಕೆ ಇಂದು ಚಾಲನೆ ನೀಡಲಾಗಿದೆ.

ಪ್ರಧಾನಿ ನರೇಂದ್ರ ಮೋದಿ ಅವರು ಆಗಸ್ಟ್ ೨೯, ೨೦೧೯ ರಂದು 'ಫಿಟ್ ಇಂಡಿಯಾ ಆಂದೋಲನ'ಕ್ಕೆ ಚಾಲನೆ ನೀಡಿದ್ದು, ಇದು ಜನರು ದೈನಂದಿನ ಜೀವನದಲ್ಲಿ ದೈಹಿಕ ಚಟುವಟಿಕೆ ಮತ್ತು ಕ್ರೀಡೆಗಳನ್ನು ಅಳವಡಿಸಿಕೊಳ್ಳಲು ಪ್ರೋತ್ಸಾಹಿಸುವ ಗುರಿಯನ್ನು ಹೊಂದಿರುವುದರಿಂದ ಈ ಆಂದೋಲನಕ್ಕೆ ಬೆಂಬಲವಾಗಿ ಮೈಸೂರು ಕೇಂದ್ರ ಜಿ.ಎಸ್.ಟಿ ಆಯೋಗವು ಇಂದು ಸಿದ್ದಾರ್ಥ ನಗರದ ಜಿ.ಎಸ್.ಟಿ ಭವನದಲ್ಲಿ ಸೈಕಲ್ ಮ್ಯಾರಥಾನ್ ಅಭಿಯಾನಕ್ಕೆ ಚಾಲನೆ ನೀಡಲಾಯಿತು.

**************

ರಾಜ್ಯದ ವಿವಿಧೆಡೆ ಮಳೆಯಾಗಿದೆ. ಪುತ್ತೂರು, ಸುಳ್ಯ, ಧರ್ಮಸ್ಥಳ ಉತ್ತರಕನ್ನಡದ ಮುಂಡಗೋಡುವಿನಲ್ಲಿ ಭಾರೀ ಮಳೆಯಾಗಿದೆ.

ಬೆಂಗಳೂರು ಸೇರಿ ಹಲವು ಜಿಲ್ಲೆಗಳಲ್ಲಿ ಇಂದು ಭಾರಿ ಪ್ರಮಾಣದ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಇಂದು ಮತ್ತು ನಾಳೆ ಕರಾವಳಿ ಜಿಲ್ಲೆಗಳು,

ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಾವಣಗೆರೆ, ಕೊಡಗು, ಕೋಲಾರ, ಮಂಡ್ಯ, ಮೈಸೂರು, ಶಿವಮೊಗ್ಗ ಜಿಲ್ಲೆಗಳಲ್ಲಿ ಭಾರೀ ಮಳೆಯಾಗಲಿದೆ.

ಉತ್ತರ ಒಳನಾಡಿನಲ್ಲಿ ಮೋಡಕವಿದ ವಾತಾವರಣವಿರಲಿದ್ದು ಒಣಹವೆ ಮುಂದುವರೆಯಲಿದೆ ಎಂದು ಹವಮಾನ ಇಲಾಖೆ ತಿಳಿಸಿದೆ.

**************